*******************************************************************************************

ಸಂಖ್ಯೆ: w-136/Committee/Proceding -24/2021-22 dt. 04-10-2021

## ಸಭೆಯ ನಡವಳಿಗಳು

ಶ್ರೀ ಸತೀಶ್ ಕುಮಾರ್ ಸಮಿತಿಯ ಕಾರ್ಯದರ್ಶಿಗಳು ಸಭೆಯನ್ನು ನಡೆಸುತ್ತಾ ಸಭೆಯಲ್ಲಿ ಉಪಸ್ಥಿತಗೊಂಡ ಮಾನ್ಯ ನೋಡಲ್ ಆಧಿಕಾರಿಗಳಿಗೆ ಮತ್ತು ಉನ್ನತ ಸಭೆಯಲ್ಲಿ ಅಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತಕೋರಿದರು. ನಂತರ ಮಾನ್ಯ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು

## ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಮಾನ್ಯ ಅಧ್ಯಕ್ಷರು ಮಾನ್ಯ ಮುಖ್ಯ ಆಯುಕ್ತರು ಆದೇಶದಂತೆ ಶೀಥಿಲಗೊಂಡಿರುವ ಕಟ್ಟಡಗಳನ್ನು ಗುರ್ತಿಸಿ ಹಾಗೂ ಅದ್ಯಾತೆ ಮೇರೆಗೆ ತೆರವುಗೊಳಿಸಲು ಸೂಚಿಸಿರುತ್ತಾರೆ ಅದರಂತೆ ಪ್ರತಿ ವಾರ್ಡ್‌ಗಳಲ್ಲಿ ಶೀಥಿಲಗೊಂಡು ಬಿಳುವ ಸ್ಥಿತಿಯಲ್ಲಿರುವ ಕಟ್ಟಡಗಳನ್ನು ಗುರ್ತಿಸಿ ವರದಿ ನೀಡುವಂತೆ ಸಭೆಯಲ್ಲಿ ತಿಳಿಸಿದರು.

ಸಹಾಯಕ ಅಭಿಯಂತರರು ಮುಂದಿನ ದಿನಗಳಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಶೀಥಿಲಗೊಂಡಿರುವ ಮನೆಗಳ ಸರ್ವೆ ಕಾರ್ಯ ಮಾಡುವುದಾಗಿ ಸಭೆಯಲ್ಲಿ ತಿಳಿಸಿದರು

ಸಭೆಯಲ್ಲಿ ಸದಸ್ಯರು ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಸರಿಯಾದ ರೀತಿಯಲ್ಲಿ ನಡೆಯುತ್ತಿರುವುದಿಲ್ಲ ಹಾಗೂ ಸ್ವಚ್ಚತೆಯ ಬಗ್ಗೆ ಸಾರ್ವಜನಿಕ ರಿಂದ ಹಲವು ದೂರುಗಳು ಕೇಳಿ ಬರುತ್ತಿದ್ದು ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಗುತ್ತಿಗೆ ಪಡೆದಿರುವ ಗುತ್ತಿಗೆದಾರರು ಸರಿಯಾದ ರೀತಿಯಲ್ಲಿ ಕಾರ್ಯ ನಿರ್ವಹಿಸದಿರುವ ಬಗ್ಗೆ ಸಭೆಯಲ್ಲಿ ಪ್ರಾಸ್ತಪಿಸಿದರು ಹಾಗೂ ಗುತ್ತಿಗೆದಾರನಿಗೆ ಸರಿಯಾಗಿ ಕಾರ್ಯನಿರ್ವಹಿಸುವಂತೆ ತಾಕಿತು ಮಾಡಲು ಸಭೇಯಲ್ಲಿ ವಿಷಯ ಪ್ರಾಸ್ತಪ ಮಾಡಿದರು.

*2

Scanned with CamScanner

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯ ಬಗ್ಗೆ ಸಭೆಯಲ್ಲಿ ವಿವರಣೆ ನೀಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಚಾಮರಾಜಪೇಟೆ ವಿಭಾಗ(ಘ.ತ್ಯಾನಿ)ಯ ಸಹಾಯದ ಕಾರ್ಯಪಾಲಕ ಅಭಿಯಂತರರು, ಸದರಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆದಾರರ ಬಗ್ಗೆ ಸಾರ್ವಜನಿಕರಿಂದ ಹೆಚ್ಚಿನ ಪ್ರಮಾಣದಲ್ಲಿ ದೂರುಗಳು ಬರುತ್ತಿದ್ದು ಹಾಗೂ ಸಭೆಯ ಸದಸ್ಯರು ಸಹ ಸದರಿ ಗುತ್ತಿಗೆದಾರರ ಬಗ್ಗೆ ಪ್ರತಿ ಸಭೆಯಲ್ಲಿ ವಿಷಯ ಪ್ರಸ್ತವನೆ ಮಾಡಿ ಗುತ್ತಿಗೆದಾರರು ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಕಾಮಗಾರಿಯನ್ನು ಸರಿಯಾಗಿ ನಿರ್ವಹಿಸದ ಬಗ್ಗೆ ದೂರು ನೀಡಿರುತ್ತಾರೆ

ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಜಮೀರ್ ಅಹ್ಮದ್ ಖಾನ್ ರವರು ಅಧಿಕ್ಷಕ ಅಭಿಯಂತರರಿಗೆ ಪತ್ರವನ್ನು ನೀಡಿ ಗುತ್ತಿಗೆದಾರರನ್ನು ಬದಲಾವಣೆ ಮಾಡುವಂತೆ ಕೋರಿರುವುದರಿಂದ ಸದರಿ ಗುತ್ತಿಗೆದಾರರನ್ನು ಬದಲಾವಣೆ ಮಾಡಿ ದಿನಾಂಕ 01–10–2021 ರಿಂದ ಎಸ್.ಎಲ್.ಎನ್ ಚೈತನ್ಯ ಎಂಟರ್ ಪ್ರೈಸಸ್ ರವರಿಗೆ ಗುತ್ತಿಗೆಯ ಕಾರ್ಯದೇಶವನ್ನು ನೀಡಿರುತ್ತಾರೆ ಹಾಗೂ ಎಸ್.ಎಲ್.ಎನ್ ಚೈತನ್ಯ ಎಂಟರ್ ಪ್ರೈಸಸ್‌ರವರು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಮಾನ್ಯ ಸದಸ್ಯರು ಸಭೆಯಲ್ಲಿ ಹಳೇಗುಡ್ಡದಹಳ್ಳಿ ಬಸ್ ನಿಲ್ದಾಣದಲ್ಲಿ ವಾಹನಗಳನ್ನು ನಿಲುಗಡೆ ಮಾಡಿ ಪೂರ್ಣ ಪ್ರಮಾಣದಲ್ಲಿ ಬಸ್ ನಿಲ್ದಾಣ ಭರ್ತಿ ಮಾಡಿದ್ದು, ಬಸ್ ನಿಲ್ದಾಣಕ್ಕೆ ಬಿ.ಎಂ.ಟಿ.ಸಿ ಬಸ್‌ಗಳು ಬರದೇ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಸಭಾಧ್ಯಕ್ಷರು ಸಭೆಯಲ್ಲಿ ಹಾಜರಿರುವ ಮಾಗಡಿ ರಸ್ತೆ ಸಂಚಾರಿ ಪೊಲೀಸ್ ಠಾಣೆಯ ಪ್ರತಿ ನಿಧಿಗಳಿಗೆ ಸದರಿ ವಿಷಯದ ಬಗ್ಗೆ ಲಿಖಿತ ದೂರನ್ನು ನೀಡಿ ಸೂಕ್ತ ಕ್ರಮ ಕೈಗೊಂಡ ಸದರಿ ವಾಹನಗಳನ್ನು ತೆರವುಗೊಳಿಸಿ ಕ್ರಮಕೈಗೊಳ್ಳಲು ಸಭೆಯಲ್ಲಿ ತಿಳಿಸಿದರು

ಸಹಾಯಕ ಕಾರ್ಯನಿರ್ವಹಕ ಅಧಿಕಾರಿಗಳ ಪ್ರತಿನಿಧಿ ಹಾಗೂ ಕೆಲಸ ಪರಿವೀಕ್ಷಕರು ದೂರು ಪುಸ್ತಕವನ್ನು ಸಭೆಯಲ್ಲಿ ನೀಡಿ ಸಾರ್ವಜನಿಕರಿಂದ ಬಂದ ದೂರುಗಳ ಪಟ್ಟಿ ಮತ್ತು ದೂರುಗಳನ್ನು ಪರಿಹರಿಸಿದ ದಿನಾಂಕ ಮತ್ತು ವಿವರಗಳನ್ನು ಸಭೆಯಲ್ಲಿ ಮಂಡಿಸಿದರು.

ಸಭಾ ಸದಸ್ಯರು ವಾರ್ಡ್ ವ್ಯಾಪ್ತಿಯ ಹೆಚ್ ಬಿ. ಜಿ ಮುಖ್ಯರಸ್ತೆ ಹಾಗೂ ಇತರೆ ಪ್ರದೇಶಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ರಸ್ತೆ ಗುಂಡಿಗಳಿದ್ದು ತಾವು ಹಿಂದಿನ ಸಭೆಯಲ್ಲಿ ನಿರ್ಣಯಿಸಿದಂತೆ ರಸ್ತೆ ಗುಂಡಿಗಳನ್ನು ಮುಚ್ಚದಿರುವ ಬಗ್ಗೆ ಸಭೆಯುಲ್ಲಿ ಪ್ರಸ್ತಾಪಿಸಿದರು.

----3

Scanned with CamScanner

ಈ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಮಳೆಗಾಲವಿರುವುದರಿಂದ ತುರ್ತಾಗಿ ರಸ್ತೆ ಗುಂಡಿಗಳನ್ನು ಮುಚ್ಚುವುದು ಸಾಧ್ಯವಿಲ್ಲವಿರುವುದಿಲ್ಲ, ಮುಂದಿನ ದಿನಗಳಲ್ಲಿ ಮಳೆ ಕಡಿಮೆಯಾದ ಮೇಲೆ ರಸ್ತೆ ಗುಂಡಿಗಳನ್ನು ಮುಚ್ಚಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾಡ್–136 2021–22 ಸಾಲಿನಲ್ಲಿ ಬಿ.ಬಿ.ಎಂ. ನೀಡಿರುವ ಅನುದಾನದಲ್ಲಿ ನೀಡಿರುವ ಅನುದಾನಕ್ಕೆ ಕಾರ್ಯಕ್ರಮಗಳ ಪಟ್ಟಿ ನೀಡುವಂತೆ ಸಭೆಯಲ್ಲಿ ತಿಳಿಸಿದರು.

ಮಾನ್ಯ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್–136 ಕ್ಕೆ ರೂ. 60.0 ಲಕ್ಷಗಳ ಅನುದಾನವನ್ನು ನೀಡಿದ್ದು ಅದರಂತೆ ಈ ಕೆಳಕಂಡ ಕಾಮಗಾರಿಗಳ ಪಟ್ಟಿಯನ್ನು

| | |
|---|---|
| 1. | **Drilling and Commissioning of New Borewell and Maintaining of Exist Borewells. And Providing Water Supply Lines in ward jurisdiction in ward No. 136 -20.00** Lakhs. |
| 2. | **Filling pothole and Providing C C to Back Streches in ward jurisdiction in ward No. 136 - 20.00 Lakhs** |
| 3. | **Repairs & Desilting of Drains and Improvement of Footpath and Culverts in ward jurisdiction in ward No. 136 -- 20.00lakhs** |

ಅಧ್ಯಕ್ಷರು ಡಬ್ಲೂಎಸ್ಎಸ್‌ಬಿ ಕಛೇರಿಗೆ ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು

ಬಿಡಬ್ಲೂಎಸ್ಎಸ್‌ಬಿ ಆಧಿಕಾರಿಗಳು ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಅಧ್ಯಕ್ಷರು ಪ್ರತಿ ನಿತ್ಯ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿಯ ವಿವರವನ್ನು ನೀಡುವಂತೆ ಸಭೆಯಲ್ಲಿ ತಿಳಿಸಿದರು.

–4

Scanned with CamScanner

ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್ -136ರ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ನೀಡಿದರು ಹಾಗೂ ಹಲವು ಹಬ್ಬ ಹರಿದಿನಗಳು ಹೆಚ್ಚಿಗಿರುವುದರಿಂದ ಕಸ ವಿಲೇವಾರಿ ಘಟಕಗಳಲ್ಲಿ ಮಿಶ್ರಕಸ ವಿಲೇವಾರಿಯಾಗದಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ಮಾನ್ಯ ಅಧ್ಯಕ್ಷರು ಜೆ.ಜೆ.ಆರ್ ನಗರ ಪೊಲೀಸ್ ಠಾಣೆಯಲ್ಲಿ ಮುಖಗವಚ ಧರಿಸದೇ ಓಡಡುವರಿಗೆ ವಿಧಿಸಿದ ದಂಡದ ವಿವರವನ್ನು ಕೋರಿದರು ಸಭೆಯಲ್ಲಿ ನೀಡುವಂತೆ ಕೋರಿದರು.

ಜೆ.ಜೆ.ಆರ್ ನಗರ ಪೊಲೀಸ್ ಠಾಣಾ ಪ್ರತಿ ನಿಧಿಯು ದಿನ ನಿತ್ಯ ಹೊಸಹಳ್ಳಿ ಮುಖ್ಯ ರಸ್ತೆ ಮತ್ತು ಇತರೆ ಮುಖ್ಯ ರಸ್ತೆಯಲ್ಲಿ ಮುಖಗವಚವಿಲ್ಲದೆ ತಿರುಗುವವರನ್ನು ಗುರ್ತಿಸಿ ಸ್ಥಳದಲ್ಲಿಯೆ ದಂಡ ವಿಧಿಸಲಾಗುತ್ತಿದೆ ಹಿಂದಿನ 15 ದಿನಗಳಲ್ಲಿ ಒಟ್ಟು ದಂಡ ವಿಧಿಸಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ಕೋವಿಡ್-19 ಆರೋಗ್ಯ ಇಲಾಖೆಯವರಿಗೆ ಕೋವಿಡ್-19 ಇತ್ತಿಚೆಗೆ ಕೈಗೊಂಡ ಕ್ರಮಗಳ ಸಭೆಯಲ್ಲಿ ವಿವರಣೆ ಕೋರಿದರು

ಆರೋಗ್ಯ ವೈದ್ಯಾಧಿಕಾರಿಗಳ ಪ್ರತಿನಿಧಿಯು ಕೋವಿಡ್-19 ಸೊಂಕಿನ ಪ್ರಮಾಣವು ವಾರ್ಡ್‌ನಲ್ಲಿ ಅತಿ ಕಡಿಮೆಯಾಗಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ಮಾನ್ಯ ಸದಸ್ಯರು ವಾರ್ಡ್-136ರ ವ್ಯಾಪ್ತಿಯಲ್ಲಿ ಹಲವು ರೀತಿಯಲ್ಲಿ ಬೇಸ್ಕಂಗೆ ಸಂಬಂಧಿಸಿದ ದೂರುಗಳು ಬಂದಿದ್ದು ರಾತ್ರಿಯ ಸಮಯದಲ್ಲಿ ಸ್ವಚ್‌ಗಳು ಹಾಗೂ ಲೈಟ್‌ಗಳು ಹಾಳಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಂ) ರವರ ಪ್ರತಿನಿದಿಯು ಸದರಿ ವಿಷಯದ ಬಗ್ಗೆ ತುರ್ತು ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್ 136ರ ವ್ಯಾಪ್ತಿಯಲ್ಲಿ ಮಾಷಲ್‌ಗಳು ವಿಧಿಸಿದ ದಂಡದ ವಿವರವನ್ನು ಕೋರಿದರು.

ವಾರ್ಡ್-136ರ ಮಾಷಲ್ ಗಳು ಒಟ್ಟು ವಿಧಿಸಿದ ದಂಡ ರೂ. 15000 ಎಸ್ ಡಬ್ಲೂಎಂ. ದಂಡ ರೂ. 10,000 ಎಂದು ಸಭೆಯಲ್ಲಿ ತಿಳಿಸಿದರು ಸದರಿ ಹಣವನ್ನು ಮುಖ್ಯ ಕಛೇರಿಗೆ ಸಲ್ಲಿಸಿರುತ್ತಾರೆ.

Scanned with CamScanner

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಡಾ॥ ಅಲ್ಲಮಪ್ರಭು, ದೂ. 9480685654<br>ಸಹಾಯಕ ನಿರ್ದೇಶಕರು (ಪಶುಪಾಲನೆ ಪಶ್ಚಿಮ) ಬಿ.ಬಿ.ಎಂ.ಪಿ. | ವಾರ್ಡ್‌ನ ನೋಡಲ್ ಅಧಿಕಾರಿ | [signature] 04/10/2021 |
| 2 | ಶ್ರೀ ಸತೀಶ್ ಕುಮಾರ್<br>ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 136<br>ಬಿ.ಬಿ.ಎಂ.ಪಿ ದೂ. 9986740382 | ಸದಸ್ಯ ಕಾರ್ಯದರ್ಶಿ | [signature] |
| 3 | ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157<br>ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ –136 | ಸದಸ್ಯರು | [signature] |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ)<br>ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ<br>ಶ್ರೀ ಬಾಬು (ಕೆಲಸ ಪರಿವೀಕ್ಷಕರು) 9342582372 | ಸದಸ್ಯರು | [signature] |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ.<br>ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157 | ಸದಸ್ಯರು | [signature] |
| 6 | ಶ್ರೀ ಉಮೇಶ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ<br>ಪ್ರತಿನಿಧಿ ದೂ. 873557760 | ಸದಸ್ಯರು | [signature] |
| 7 | ಶ್ರೀ ಮೊಹಮದ್ ಮುಜಾಮೀಲ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ<br>ಪ್ರತಿನಿಧಿ ದೂ. 7349649906 | ಸದಸ್ಯರು | [signature] |
| 8 | ಶ್ರೀಮತಿ ಚಂದ್ರಕಲಾ ದೂ. 8904845720<br>ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 136 | ಸದಸ್ಯರು | [signature] |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ<br>ಪ್ರತಿನಿಧಿಎನ್ ಎನ್. ಲಕ್ಷ್ಮಿ ನರಸಿಂಹಯ್ಯ<br>ದೂ. 9845563157 | ಸದಸ್ಯರು | [signature] |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ<br>( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ<br>ಕುಮಾರ ಸ್ವಾಮಿ, ದೂ. 9060341644 | ಸದಸ್ಯರು | [signature] |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಂ) ರವರ<br>ಪ್ರತಿನಿಧಿ | ಸದಸ್ಯರು | |
| 12 | ಮಾಗಡಿ ರಸ್ತೆ ಸಂಚಾರ ಪೊಲೀಸ್ ಠಾಣೆ ಯ ಪ್ರತಿನಿಧಿ<br>ಶ್ರೀ ರಾಮಚಂದ್ರ ಎ. ಎ.ಎಸ್.ಐ ದೂ.9902992624 | ಸದಸ್ಯರು | [signature] HC6109 |
| 13 | ಜೆ.ಜೆ.ಆರ್ ನಗರ ಪೊಲೀಸ್ ಠಾಣೆ ಯ ಪ್ರತಿನಿಧಿ | ಸದಸ್ಯರು | |
| 14 | ವಾರ್ಡ್ 136 ಮಾರ್ಷಲ್, ಮುಬೀನ್. M.S. | ಸದಸ್ಯರು | [signature] |

[signature]
ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 136
ವಾರ್ಡ್ ಹಂತದ ಸಮಿತಿ

[signature] 04/10/2021
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 136

Scanned with CamScanner